# All India Radio: Bangalore
# Regional Bulletin In Kannada
# 16.12.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**16.12.2025 / 6.40 p.m.**

***************

<u>ಮುಖ್ಯಾಂಶಗಳು</u>

***************

೧.ವಿಕಸಿತ ಭಾರತಕ್ಕೆ ತಂತ್ರಜ್ಞಾನ ಹಾಗೂ ಮೌಲ್ಯಗಳ ಅಗತ್ಯತೆ ಪ್ರತಿಪಾದಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು

೨.ಅರ್ಹ ಫಲಾನುಭವಿಗಳ ಕಾರ್ಡ್‌ಗಳನ್ನು ರದ್ದು ಮಾಡದಂತೆ ಸಚಿವ ಕೆ.ಹೆಚ್. ಮುನಿಯಪ್ಪ ಅಧಿಕಾರಿಗಳಿಗೆ ಸೂಚನೆ

೩.ರಾಜ್ಯದಲ್ಲಿ ಕಸ್ತೂರಿ ರಂಗನ್ ವರದಿ ಅನುಷ್ಠಾನ ಮಾಡುವುದಿಲ್ಲ ; ಮೇಲ್ಮನೆಯಲ್ಲಿ ಸರ್ಕಾರ ಸ್ಪಷ್ಟನೆ

೪.ಐಪಿಎಲ್ ಉದ್ಘಾಟನಾ ಪಂದ್ಯ ಬೆಂಗಳೂರಿನಲ್ಲಿ ನಡೆಸುವ ಕುರಿತು ಬಿಸಿಸಿಐ ಜೊತೆ ಚರ್ಚೆ - ವೆಂಕಟೇಶ್ ಪ್ರಸಾದ್

೫.ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಹೆಚ್ಚಾಗಲಿದೆ ಶೀತಗಾಳಿ ; ಹವಾಮಾನ ಇಲಾಖೆ ಮುನ್ಸೂಚನೆ

***************

ಸುತ್ತೂರು ಮಠದಂತಹ ಸಂಸ್ಥೆಗಳು ಯುವ ಮನಸ್ಸುಗಳಿಗೆ ಸ್ಫೂರ್ತಿ ನೀಡುವ ಹಾಗೂ ಜವಾಬ್ದಾರಿಯುತ ನಾಗರಿಕರನ್ನು ಪೋಷಿಸುವ ಕೆಲಸ ಮಾಡುತ್ತಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಭಿಪ್ರಾಯಪಟ್ಟಿದ್ದಾರೆ.

ಸುತ್ತೂರಿನ ಆದಿ ಜಗದ್ಗುರು ಶ್ರೀ ಶಿವರಾತ್ರಿ ಶಿವಯೋಗಿಗಳರವರ ಸಾವಿರದ ೬೬ನೇ ಜಯಂತಿ ಮಹೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆಧ್ಯಾತ್ಮಿಕ ಸಂಸ್ಥೆಗಳು ಮಾನವೀಯತೆಯನ್ನು ಒಂದುಗೂಡಿಸುವ ಕಾರ್ಯ ನಿರ್ವಹಿಸುತ್ತಿದೆ ಎಂದು ತಿಳಿಸಿದ್ದಾರೆ.

೨೦೪೭ರ ವೇಳೆಗೆ ವಿಕಸಿತ ಭಾರತದ ದೂರದೃಷ್ಟಿಯತ್ತ ಭಾರತ ಮುನ್ನಡೆಯುತ್ತಿರುವಾಗ ತಂತ್ರಜ್ಞಾನದ ಶಕ್ತಿ ಮತ್ತು ಮೌಲ್ಯಗಳ ಅಗತ್ಯತೆಯನ್ನು ಪ್ರತಿಪಾದಿಸಿದ್ದಾರೆ.

ಇದಕ್ಕೂ ಮೊದಲು ಮಳವಳ್ಳಿ ಪಟ್ಟಣಕ್ಕೆ ಆಗಮಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಚೆಲುವರಾಯಸ್ವಾಮಿ ಹೂ ಗುಚ್ಛ ನೀಡುವ ಮೂಲಕ ಸ್ವಾಗತಿಸಿದರು.

***************

ಅಧಿಕಾರಿಗಳು ಮತ್ತು ನ್ಯಾಯ ಬೆಲೆ ಅಂಗಡಿಗಳ ಮಾಲಿಕರ ಸಂಘದ ಅಧ್ಯಕ್ಷರುಗಳೊಂದಿಗೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್.ಮುನಿಯಪ್ಪ ಸುವರ್ಣ ವಿಧಾನ ಸೌಧದ ಸಭಾಂಗಣದಲ್ಲಿ ಬೆಳಗಾವಿ ಮತ್ತು ಕಲಬುರಗಿ ವಿಭಾಗದ ಪ್ರಗತಿ ಪರಿಶೀಲನೆ ಸಭೆ ನಡೆಸಿದರು. ಬಳಿಕ ಮಾತನಾಡಿದ ಸಚಿವ ಕೆ. ಹೆಚ್. ಮುನಿಯಪ್ಪ, ಕೇಂದ್ರ ಮತ್ತು ರಾಜ್ಯ ಸರ್ಕಾರದ ಮಾನದಂಡಗಳ ನಿರ್ದೇಶನದಂತೆ ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನು ಪತ್ತೆ ಹಚ್ಚಿ ಎಪಿಎಲ್ ಆಗಿ ಪರಿವರ್ತಿಸುವಂತೆ ಸೂಚಿಸಿದ್ದಾರೆ. ಯಾವುದೇ ಕಾರಣಕ್ಕೂ ಅರ್ಹ ಫಲಾನುಭವಿಗಳ ಕಾರ್ಡ್‌ಗಳನ್ನು ರದ್ದು ಮಾಡಬಾರದು ಎಂದು ಹೇಳಿದ್ದಾರೆ. ಸುಮಾರು ೩ ಸಾವಿರದ ೫೧೭ ನೂತನ ನ್ಯಾಯ ಬೆಲೆ ಅಂಗಡಿಗಳನ್ನು ಒಳ ಮೀಸಲಾತಿ ಆಧಾರದ ಮೇಲೆ ರಾಷ್ಟ್ರದಲ್ಲಿಯೇ ಮೊದಲ ಬಾರಿಗೆ ರಾಜ್ಯದಲ್ಲಿ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

***************

ರಾಜ್ಯದಲ್ಲಿ ಕಸ್ತೂರಿ ರಂಗನ್ ವರದಿ ಅನುಷ್ಠಾನ ಮಾಡುವುದಿಲ್ಲ ಎಂದು ಸರ್ಕಾರ ಮೇಲ್ಮನೆಯಲ್ಲಿ ಸ್ಪಷ್ಟಪಡಿಸಿದೆ. ಪರಿಷತ್ ಕಲಾಪದಲ್ಲಿಂದು ಕಾಂಗ್ರೆಸ್‌ನ ಐವಾನ್ ಡಿಸೋಜಾ ಮಾತನಾಡಿ, ಅರಣ್ಯ ಕಸ್ತೂರಿ ರಂಗನ್ ವರದಿ ಜಾರಿಯಾಗದೇ ಕರಾವಳಿ ಭಾಗಕ್ಕೆ ಸಮಸ್ಯೆಯಾಗಲಿದೆ ಎಂದು ತಿಳಿಸಿದರು. ಸಚಿವ ಈಶ್ವರ್ ಖಂಡ್ರೆ ಉತ್ತರ ನೀಡಿ, ಕೇಂದ್ರದ ವರದಿ ತಿರಸ್ಕಾರ ಮಾಡಲಾಗಿದ್ದು, ಕರಾವಳಿ ಭಾಗದಲ್ಲಿ ಇರುವವರೆಗೆ

ಯಾವುದೇ ಸಮಸ್ಯೆ ಆಗಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಸದಸ್ಯ ಶಿವಕುಮಾರ್ ಅವರ ಪ್ರಸ್ತಾವನೆಗೆ ಉತ್ತರಿಸಿದ ಸಚಿವ ಕೃಷ್ಣ ಬೈರೇಗೌಡ, ಖಾಸಗಿ ಭೂಮಾಪಕರ ಸೇವೆಯನ್ನು ಖಾಯಂಗೊಳಿಸಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ. ಇದಕ್ಕೂ ಮೊದಲು ಅಜಾನ್ ವೇಳೆ ಧ್ವನಿವರ್ಧಕಗಳ ಶಬ್ದಮಟ್ಟವು ಹೆಚ್ಚಾಗಿರುವ ಕುರಿತಂತೆ ಸದನದಲ್ಲಿ ಕೆಲಹೊತ್ತು ಕಾವೇರಿದ ಚರ್ಚೆ ನಡೆಯಿತು. ಇದು ಒಂದು ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ಮಾತಿನ ಚಕಮಕಿಗೆ ಕಾರಣವಾಯಿತು.

***************

ಕರ್ನಾಟಕ ಕೈಮಗ್ಗ ಅಭಿವೃದ್ದಿ ನಿಗಮವನ್ನು ಕರ್ನಾಟಕ ರಾಜ್ಯ ಜವಳಿ ಮೂಲ ಸೌಕರ್ಯ ಅಭಿವೃದ್ಧಿ ನಿಗಮದೊಂದಿಗೆ ವಿಲೀನ ಮಾಡಿದರೂ ಕೈಮಗ್ಗ ನೇಕಾರರ ಹಿತರಕ್ಷಣೆಯ ಕಾರ್ಯಕ್ರಮಗಳಲ್ಲಿ ಯಾವುದೇ ಬದಲಾವಣೆಯಾಗುವುದಿಲ್ಲ ಎಂದು ಜವಳಿ ಸಚಿವ ಶಿವಾನಂದ ಪಾಟೀಲ ಭರವಸೆ ನೀಡಿದ್ದಾರೆ. ನೇಕಾರರಿಗೆ ನಿರಂತರ ನೂಲು ಪೂರೈಕೆ ಮಾಡಿ ಉದ್ಯೋಗ ಒದಗಿಸಲಾಗುವುದು. ಕೈಮಗ್ಗ ಉತ್ಪನ್ನ ಮಾರಾಟಕ್ಕೆ ಇ-ಕಾಮರ್ಸ್ ವೇದಿಕೆ ಕಲ್ಪಿಸಲಾಗುವುದು ಎಂದು ತಿಳಿಸಿದ್ದಾರೆ. ಕೈಮಗ್ಗ ನೇಕಾರರು ಆಸಕ್ತಿ ತೋರಿದರೆ ವಿದ್ಯುತ್ ಮಗ್ಗ ಖರೀದಿಗೆ ಹಾಗೂ ಎಲೆಕ್ಟ್ರಾನಿಕ್ ಜಕಾರ್ಡ್ ಖರೀದಿಗೆ ಸಹಾಯಧನ ಒದಗಿಸಲಾಗುವುದು. ಒಂದರಿಂದ ಹತ್ತು ಅಶ್ವಶಕ್ತಿವರೆಗೆ ಉಚಿತವಾಗಿ ವಿದ್ಯುತ್ ಪೂರೈಕೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

***************

ಕಲಬುರಗಿ ಜಿಲ್ಲೆಯ ಆಳಂದ ಕ್ಷೇತ್ರದ ಶಾಸಕ ಬಿ.ಆರ್. ಪಾಟೀಲ್ ಮತಗಳ್ಳತನದ ಕುರಿತಂತೆ ಚರ್ಚೆಗೆ ಅವಕಾಶ ನೀಡಬೇಕು ಎಂದು ವಿಧಾನಸಭೆಯಲ್ಲಿ ಮನವಿ ಮಾಡಿದರು. ಈ ನಡುವೆ ಪ್ರತಿಪಕ್ಷ ನಾಯಕ ಆರ್. ಅಶೋಕ, ಗೃಹಲಕ್ಷ್ಮಿ ಯೋಜನೆ ಹಣ ಆಗಸ್ಟ್ ತಿಂಗಳವರೆಗೂ ಬಿಡುಗಡೆಯಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವರು ಹೇಳಿಕೆ ನೀಡಿದ್ದು, ಸರ್ಕಾರ ಸ್ಪಷ್ಟನೆ ನೀಡುವಂತೆ ಒತ್ತಾಯಿಸಿದರು. ಮತಗಳ್ಳತನದ ಚರ್ಚೆಗೆ ಅವಕಾಶ ನೀಡುವುದಾಗಿ ಭರವಸೆ ನೀಡಿದ ಸಭಾಧ್ಯಕ್ಷರು ಉತ್ತರಕರ್ನಾಟಕ ಭಾಗದ ಅಭಿವೃದ್ಧಿಯ ಬಗ್ಗೆ ಚರ್ಚೆಯನ್ನು ನಡೆಸುವುದಾಗಿ ತಿಳಿಸಿದರು. ಭೋಜನ ವಿರಾಮದ ಬಳಿಕ ಚರ್ಚೆ ಮುಂದುವರೆಸಿದ ಬಸವರಾಜ ರಾಯರೆಡ್ಡಿ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜೊತೆಯಾಗಿ ಕಾರ್ಯ ನಿರ್ವಹಿಸುವಂತೆ ಸಲಹೆ ನೀಡಿದರು.

***************

ರಾಜ್ಯ ಸರ್ಕಾರಕ್ಕೆ ಅಭಿವೃದ್ಧಿ ಅಂದರೆ ಗೊತ್ತೇ ಇಲ್ಲ ಎಂದು ಕೇಂದ್ರ ಬೃಹತ್ ಕೈಗಾರಿಕಾ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇನ್ನೊಂದೆಡೆ ಮೈಸೂರಿನಲ್ಲಿ ಮಾತನಾಡಿದ ಕುಮಾರಸ್ವಾಮಿ ರಾಜ್ಯ ಸರ್ಕಾರದ ದುರಾಡಳಿತದಿಂದ ರಾಜ್ಯದಲ್ಲಿ ೨ ಸಾವಿರದ ೮೦೦ ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದ್ದಾರೆ. ಸೂಕ್ತ ಕಾಲದಲ್ಲಿ ರಾಜ್ಯ ಸರ್ಕಾರದ ಭ್ರಷ್ಟಾಚಾರಗಳ ವಿರುದ್ಧ ದಾಖಲೆ ಬಿಡುಗಡೆಗೊಳಿಸಲಾಗುವುದು ಎಂದು ತಿಳಿಸಿದ್ದಾರೆ.

ಧ್ವನಿ : ಹೆಚ್.ಡಿ. ಕುಮಾರಸ್ವಾಮಿ (ಮೈಸೂರು)

***************

ಈ ಬಾರಿಯ ಐಪಿಎಲ್ ಉದ್ಘಾಟನಾ ಪಂದ್ಯವನ್ನು ಬೆಂಗಳೂರಿನಲ್ಲಿ ನಡೆಸುವ ಕುರಿತಂತೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಜೊತೆ ಈಗಾಗಲೇ ಮಾತುಕತೆ ನಡೆಸಲಾಗಿದೆ ಎಂದು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಘದ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ತಿಳಿಸಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, “ಬೆಂಗಳೂರಿನಲ್ಲಿ ಐಪಿಎಲ್ ಉದ್ಘಾಟನಾ ಪಂದ್ಯ ಆಯೋಜನೆ ಬಗ್ಗೆ ಬಿಸಿಸಿಐ ಜೊತೆ ಚರ್ಚೆ ನಡೆದಿದೆ. ಬಿಸಿಸಿಐ ಕೂಡ ಈ ಬಾರಿ ಬೆಂಗಳೂರಿನಲ್ಲಿ ಉದ್ಘಾಟನಾ ಪಂದ್ಯ ನಡೆಸುವ ಕುರಿತು ಸಕಾರಾತ್ಮಕವಾಗಿ ಪ್ರತಿಕ್ರಿಯೆ ನೀಡಿದೆ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಈಗಾಗಲೇ ಪಂದ್ಯಾವಳಿ ನಡೆಸಲು ಹಸಿರು ನಿಶಾನೆ ತೋರಿದ್ದಾರೆ. ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಸೇರಿದಂತೆ ಅಂತಾರಾಷ್ಟ್ರೀಯ ಮಟ್ಟದ ಎಲ್ಲಾ ಮಾದರಿಯ ಪಂದ್ಯಗಳನ್ನು ಆಯೋಜಿಸುವ ಸಾಮರ್ಥ್ಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ : ವೆಂಕಟೇಶ್ ಪ್ರಸಾದ್

***************

ಇನ್ನು ಹವಾವರ್ತಮಾನ,

ರಾಜ್ಯದಲ್ಲಿ ಕಳೆದ ಒಂದು ವಾರದಿಂದ ತೀವ್ರ ಚಳಿ ಆವರಿಸಿದ್ದು, ಬೆಂಗಳೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಶೀತಗಾಳಿ ಹೆಚ್ಚಾಗಿದೆ. ಪೆಸಿಫಿಕ್ ಮಹಾಸಾಗರದಲ್ಲಿನ ಲ್ಯಾನಿನೊ ಈ ಚಳಿಗೆ ಕಾರಣವಾಗಿದೆ.

ಬೀದರ್, ಕಲಬುರಗಿ, ವಿಜಯಪುರದಲ್ಲಿ ಚಳಿ ಹೆಚ್ಚಾಗಿದೆ. ದಕ್ಷಿಣ ಒಳನಾಡಿನ ಜಿಲ್ಲೆಗಳಾದ ಬೆಂಗಳೂರು, ರಾಮನಗರ, ಮಂಡ್ಯ, ಮೈಸೂರು, ಚಾಮರಾಜನಗರ,

ಕೊಡಗು, ಬಳ್ಳಾರಿ, ವಿಜಯನಗರ ಜಿಲ್ಲೆಗಳಲ್ಲೂ ಚಳಿ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಮೈಸೂರಿನಲ್ಲಿ ೯.೭ ಡಿಗ್ರಿ ಹಾಗೂ ಬಾಗಲಕೋಟೆ, ಬಳ್ಳಾರಿ, ಬೆಳಗಾವಿ, ಹಾವೇರಿ, ಕಲಬುರಗಿ, ವಿಜಯಪುರದಲ್ಲಿ ೧೦ ಡಿಗ್ರಿ ಸೆಲ್ಸಿಯೆಸ್ ತಾಪಮಾನ ದಾಖಲಾಗಿದೆ.

***************

ಬೆಂಗಳೂರಿನ ವಿಜಯನಗರದ ಪಾಲಿಕೆ ಬಜಾರ್‌ನಲ್ಲಿ ಇ-ಹರಾಜು ಮೂಲಕ ಮಳಿಗೆಗಳನ್ನು ಹಂಚಿಕೆ ಮಾಡಲು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕೋರಮಂಗಲದಿಂದ ಸರ್ಜಾಪುರ ಕಡೆಯ ಒಂದು ಕಿಲೋಮೀಟರ್ ಉದ್ದದ ರಸ್ತೆಯ ವೈಟ್‌ಟ್ಯಾಪಿಂಗ್ ಕಾಮಗಾರಿಯು ಒಂದು ಭಾಗದಲ್ಲಿ ಪೂರ್ಣಗೊಳಿಸಿದ್ದು, ಮತ್ತೊಂದು ಭಾಗದಲ್ಲಿ ಶೀಘ್ರವೇ ಕಾಮಗಾರಿ ಪೂರ್ಣಗೊಳಿಸುವಂತೆ ತಿಳಿಸಿದ್ದಾರೆ. ಬೆಳ್ಳಂದೂರು ಕೆರೆ ಬಫರ್ ವಲಯದಲ್ಲಿ ರಸ್ತೆ ನಿರ್ಮಾಣ ಮಾಡುವ ಸಲುವಾಗಿ ಸಮೀಕ್ಷೆ ನಡೆಸಿ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

***************

ಬೆಳಗಾವಿಯಲ್ಲಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಸಂಜೀವಿನಿ ವತಿಯಿಂದ ಆಯೋಜಿಸಲಾದ ಬೆಳಗಾವಿ ಸರಸ್ ಮೇಳದಲ್ಲಿ ಜಿಲ್ಲೆಯ ಸ್ವಸಹಾಯ ಸಂಘದ ಮಹಿಳೆಯರು ತಯಾರಿಸಿದ ಉತ್ಪನ್ನಗಳು ಎಲ್ಲರ ಗಮನ ಸೆಳೆದವು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಮಹಾನಗರ ಪಾಲಿಕೆ ಬೆಳಗಾವಿ ಇವರ ಸಹಯೋಗದಲ್ಲಿ ಡಿಸೆಂಬರ್ ೧೨ ರಿಂದ ೨೧ ವರೆಗೆ ಹಮ್ಮಿಕೊಂಡ ಮೇಳದಲ್ಲಿ ಜಿಲ್ಲೆಯ ಮಹಿಳಾ ಸ್ವ-ಸಹಾಯ ಗುಂಪುಗಳಿಂದ ತಯಾರಿಸಿದ ಪರಿಸರ ಸ್ನೇಹಿ ಜೂಟ್ ಬ್ಯಾಗ್‌ಗಳು, ಇಳಕಲ್ ಸೀರೆಗಳು ಹಾಗೂ ಆರೋಗ್ಯಕರ ನೈಸರ್ಗಿಕ ವಸ್ತುಗಳು ಜನರ ಗಮನ ಸೆಳೆದವು.

***************